## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:–** ರಾಮ್‌ಥಾಳ್ (ಮರೋಳ್) ಹನಿ ನೀರಾವರಿ ಯೋಜನೆಯ ಅನುಷ್ಠಾನದಲ್ಲಿ ಕಳಪೆ ಆಗಿರುವ ಕಾಮಗಾರಿಯ ಬಗ್ಗೆ ತನಿಖೆ ನಡೆಸುವ ಕುರಿತು.

****

**ಓದಲಾಗಿದೆ:–** ಸರ್ಕಾರದ ಆದೇಶ ಸಂಖ್ಯೆ:ಜಸಂಇ 195 ಕೆಬಿಎನ್ 2012, ದಿನಾಂಕ:16/08/2012.

ಪ್ರಸ್ತಾವನೆ:–

ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ರಾಮ್‌ಥಾಳ್ (ಮರೋಳ) ಏತ ನೀರಾವರಿ ಯೋಜನೆಯ ಎರಡನೇ ಹಂತದಡಿ ಹನಿ ನೀರಾವರಿ ಪದ್ಧತಿಯನ್ನು ಪೈಲೆಟ್ ಯೋಜನೆಯಾಗಿ ಅಳವಡಿಸಲು 2011–12ನೇ ಸಾಲಿನ ದರಪಟ್ಟಿಯ ದರಗಳಂತೆ ರೂ.786.11 ಕೋಟಿಗಳ ಮೊತ್ತಕ್ಕೆ ಮೂರು ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆ ವೆಚ್ಚವನ್ನು ಸೇರಿಸಿಕೊಂಡು ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿತ್ತು. ಈ ಪದ್ಧತಿಯನ್ನು ಅಳವಡಿಸುವುದರಿಂದ ಉಳಿತಾಯವಾಗುವ 1.34 ಟಿ.ಎಂ.ಸಿ. ನೀರನ್ನು ಹೆಚ್ಚುವರಿ ಅಚ್ಚುಕಟ್ಟು 11,230 ಹೆಕ್ಟೇರ್‌ಗಳಿಗೆ ಬಾಗಲಕೋಟೆ ಜಿಲ್ಲೆಯ ಹುನಗುಂದ ತಾಲ್ಲೂಕಿನಲ್ಲಿ ರಾಮ್‌ಥಾಳ್ (ಮರೋಳ್) ಏತ ನೀರಾವರಿ ಯೋಜನೆ ಅಡಿಯಲ್ಲಿಯೇ ಕಲ್ಪಿಸಲು ಸಹ ಆದೇಶಿಸಲಾಗಿತ್ತು.

ರಾಮ್‌ಥಾಳ್ (ಮರೋಳ್) ಏತ ನೀರಾವರಿ ಯೋಜನೆಯು ಹುನಗುಂದ ತಾಲ್ಲೂಕಿನ ಸುಮಾರು 65,000 ಎಕರೆ (26,305 ಹೆಕ್ಟೇರ್) ಪ್ರದೇಶಕ್ಕೆ ನೀರಾವರಿ ಒದಗಿಸುವ ಮಹತ್ವಾಕಾಂಕ್ಷಿ ಯೋಜನೆಯು 2018ರಲ್ಲಿ ಉದ್ಘಾಟನೆಯಾಗಿರುತ್ತದೆ. ಸದರಿ ಯೋಜನೆಯ ಕಾಮಗಾರಿಯಲ್ಲಿ ಅಧಿಕಾರಿಗಳು ಮತ್ತು ಗುತ್ತಿಗೆದಾರರು ಭ್ರಷ್ಟಾಚಾರ ನಡೆಸಿರುವುದರಿಂದ ಕಾಮಗಾರಿಯು ಕಳಪೆಯಿಂದ ಕೂಡಿದ್ದು, ಹುನಗುಂದ ತಾಲ್ಲೂಕಿನ ಬರಗಾಲ ಪೀಡಿತ ರೈತರಿಗೆ ಈ ಯೋಜನೆಯಿಂದ 20% ಹೊಲಗಳಿಗೂ ಕೂಡ ನೀರು ಹರಿಸದಿರುವುದು ಅಲ್ಲದೇ, ಸದರಿ ಕಾಮಗಾರಿಯು ಸಂಪೂರ್ಣವಾಗಿ ಕಳಪೆ ಮಟ್ಟದಿಂದ ಕೂಡಿರುವುದರಿಂದ ತನಿಖೆ ನಡೆಸಿ, ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಂಡು, ಗುತ್ತಿಗೆದಾರರನ್ನು ಕಪ್ಪು ಪಟ್ಟಿಗೆ ಸೇರ್ಪಡೆ ಮಾಡುವಂತೆ ದೂರು ಸಲ್ಲಿಸಲಾಗಿದೆ.

ಅದರಂತೆ, ಪ್ರಸ್ತಾವನೆಯಲ್ಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಇ–ಜಸಂಇ 40 ಕೆಬಿಎನ್ 2019, ಬೆಂಗಳೂರು, ದಿನಾಂಕ:15/10/2019.**

ರಾಮ್‌ಥಾಳ್ (ಮರೋಳ್) ಏತ ನೀರಾವರಿ ಯೋಜನೆಯು ಹುನಗುಂದ ತಾಲ್ಲೂಕಿನ ಸುಮಾರು 65,000 ಎಕರೆ (26,305 ಹೆಕ್ಟೇರ್) ಪ್ರದೇಶಕ್ಕೆ ನೀರಾವರಿ ಒದಗಿಸುವ ಯೋಜನೆಯಲ್ಲಿ ನಡೆದಿರುವ ಕಳಪೆ ಕಾಮಗಾರಿ ಬಗ್ಗೆ ಜಲ ಸಂಪನ್ಮೂಲ ಇಲಾಖೆಯ ಪೊಲೀಸ್ ಮಹಾ ನಿರೀಕ್ಷಕರು, ವಿಚಕ್ಷಣಾ ದಳ (vigilance cell) ಇವರು ತನಿಖೆ ನಡೆಸಿ, ತನಿಖಾ ವರದಿಯನ್ನು 15 ದಿನದೊಳಗೆ ಸಲ್ಲಿಸುವಂತೆ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ
15/10/19

(ಬಿ. ಹರಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ–5)
ಜಲ ಸಂಪನ್ಮೂಲ ಇಲಾಖೆ

ಪ್ರತಿಯನ್ನು:

1. ಪೊಲೀಸ್ ಮಹಾ ನಿರೀಕ್ಷಕರು, ವಿಚಕ್ಷಣಾ ದಳ (vigilance cell), ಬಸವ ಭವನ, ಬೆಂಗಳೂರು.

2. ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಅಣೆಕಟ್ಟು ವಲಯ, ಆಲಮಟ್ಟಿ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು,
5. ಸರ್ಕಾರದ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
6. ಹೆಚ್ಚುವರಿ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ ಇವರ ಆಪ್ತ ಸಹಾಯಕರು.
7. ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ), ಜಲ ಸಂಪನ್ಮೂಲ ಇಲಾಖೆ.
8. ಶಾಖಾ ರಕ್ಷಕ ಕಡತ/ ಹೆಚ್ಚಿನ ಪ್ರತಿಗಳು.